**ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು**

**ಸಿ.ಸಿ.381/2019**

**ಸಿ.ಡಬ್ಲ್ಯೂ-4, ಪಿ.ಡಬ್ಲ್ಯೂ-3**

**ದಿಃ 11.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| **ಸಾಕ್ಷಿಯ ಹೆಸರು** | ಪುಟ್ಟಸ್ವಾಮಯ್ಯ |
| **ತಂದೆ/ಗಂಡನ ಹೆಸರು** | ಪುಟ್ಟಾಬೋವಿ |
| **ವಯಸ್ಸು** | 78 ವರ್ಷ |
| **ಕೆಲಸ** | ವ್ಯವಸಾಯ |
| **ವಾಸಸ್ಥಳ** | ಕೆಬ್ಬೇಕೊಪ್ಪಲು |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ**

ನನಗೆ ಆರೋಪಿ ಗೊತ್ತು. ಅವರು ನಮ್ಮ ಊರಿನವರು. ಚಾಸಾ1,5 ಮತ್ತು 6 ಗೊತ್ತು. ನನಗೆ ಈ ಘಟನೆ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನನಗೆ ಗಲಾಟೆ ವಿಚಾರವಾಗಿ ಏನೂ ಗೊತ್ತಿಲ್ಲ. ನಾನು ಪೊಲೀಸರ ಸಮಕ್ಷಮ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ.

**ಪಾಟೀ ಸವಾಲು ಮಾನ್ಯ ಎ.ಪಿ.ಪಿ ರವರಿಂದಃ**

ದಿಃ22.05.2015 ರಂದು ಬೆಳಿಗ್ಗೆ 8 ಗಂಟೆ ಸಮಯದಲ್ಲಿ ನಾನು ಅಂಗಡಿ ಬೀದಿ ಕಡೆ ನಡೆದುಕೊಂಡು ಹೋಗುತ್ತಿದ್ದಾಗ ಚಾಸಾ1 ರವರ ಮನೆಯಲ್ಲಿ ಗಲಾಟೆ ನಡೆಯುತ್ತಿತ್ತು ಎಂದರೆ ಸರಿಯಲ್ಲ. ಜಮೀನಿನಲ್ಲಿ ಹೋಗಿ ನೋಡಿದಾಗ ಆರೋಪಿ ಚಾಸಾ1 ರವರ ಮನೆಯ ಮುಂದೆ ನಿಂತುಕೊಂಡು ಹೊಗೆ ಸಸಿಗಳನ್ನು ಹಾಕಿ ನಾಶಮಾಡಿದ್ದೀರಿ ಎಂದು ಕೇಳಿದ್ದಕ್ಕೆ ಆರೋಪಿ ಚಾಸಾ1 ರವರಿಗೆ ಅವಾಚ್ಯಶಬ್ದಗಳಿಂದ ನಿಂದಿಸಿದರು ಎಂದರೆ ಸರಿಯಲ್ಲ. ಚಾಸಾ1 ರವರ ತಲೆಯನ್ನು ಹಿಡಿದುಕೊಂಡು ಎಳೆದಾಡಿ ಕೈಯಿಂದ ಚಾಸಾ1 ರವರ ಮೈಕೈಗೆ ಹೊಡೆದರು ಎಂದರೆ ಸರಿಯಲ್ಲ. ಆರೋಪಿ ಮಚ್ಚಿನಿಂದ ಕೊಚ್ಚಿ ಕೊಲೆ ಮಾಡುವುದಾಗಿ ಚಾಸಾ1 ರವರಿಗೆ ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ನೀವು ಸದರಿ ಜಗಳವನ್ನು ಬಿಡಿಸಿದ್ದೀರಿ ಎಂದರೆ ಸರಿಯಲ್ಲ. ಈ ಬಗ್ಗೆ ಚಾಸಾ1 ರವರು ದೂರನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಮೇಲೆ ಓದಿ ಹೇಳಿದ ಹಾಗೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯ ಭಾಗವನ್ನು ನಿಪಿ3 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**<u>ಮರುವಿಚಾರಣೆ ಇಲ್ಲ.</u>**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ, ಹುಣಸೂರು